## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಕರ್ನಾಟಕ ರಾಜ್ಯದಲ್ಲಿ ರಾಷ್ಟ್ರೀಯ ಆಹಾರ ಭದ್ರತಾ ಆದ್ಯಾದೇಶ 2013 ನ್ನು ಅನುಷ್ಠಾನಗೊಳಿಸುವ ಸಂಬಂಧ ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳನ್ನು ಜಿಲ್ಲಾ ಕುಂದುಕೊರತೆಗಳ ನಿವಾರಣಾ ಅಧಿಕಾರಿಗಳನ್ನಾಗಿ ನೇಮಿಸುವ ಕುರಿತು

****

**ಪ್ರಸ್ತಾವನೆ**

ಕೇಂದ್ರ ಸರ್ಕಾರವು ದಿನಾಂಕ. 05.07.2013 ರಂದು ಕೇಂದ್ರ ಸರ್ಕಾರದ ವಿಶೇಷ ಗೆಜೆಟ್ ಪ್ರಕಟಣೆಯಲ್ಲಿ ದೇಶದಾದ್ಯಂತ ಆಹಾರ ಭದ್ರತೆಯನ್ನು ಒದಗಿಸಲು ಆಹಾರ ಧಾನ್ಯಗಳನ್ನು ವಿತರಿಸುವ 2013ರ ರಾಷ್ಟ್ರೀಯ ಆಹಾರ ಭದ್ರತಾ ಆದ್ಯಾದೇಶ 2013ನ್ನು ಜಾರಿಗೆ ತಂದಿರುತ್ತದೆ. ರಾಷ್ಟ್ರೀಯ ಆಹಾರ ಭದ್ರತಾ ಕಾಯಿದೆ 2013ನ್ನು ಸಂಸತ್ತು ಅಂಗೀಕರಿಸಿದೆ. ಆಹಾರ ಭದ್ರತಾ ಕಾಯಿದೆಯನ್ನು ಅನುಷ್ಠಾನಗೊಳಿಸಲು ರಾಷ್ಟ್ರೀಯ ಆಹಾರ ಭದ್ರತಾ ಕಾಯಿದೆ 2013 ಸೆಕ್ಷನ್ 15 ರನ್ವಯ ರಾಜ್ಯದ ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳನ್ನು ಸಾರ್ವಜನಿಕ ಕುಂದುಕೊರತೆ ನಿವಾರಣಾ ಅಧಿಕಾರಿಗಳನ್ನಾಗಿ ನೇಮಿಸಬೇಕಾಗಿರುತ್ತದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಆನಾಸ 52 ಡಿಆರ್‌ಎ 2013 (2012), ಬೆಂಗಳೂರು, ದಿನಾಂಕ. 05.09.2013**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ರಾಷ್ಟ್ರೀಯ ಆಹಾರ ಭದ್ರತಾ ಆದ್ಯಾದೇಶ 2013 ಸೆಕ್ಷನ್ 15 ರನ್ವಯ ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳನ್ನು ಜಿಲ್ಲಾ ಕುಂದುಕೊರತೆ ನಿವಾರಣಾ ಅಧಿಕಾರಿಗಳನ್ನಾಗಿ ನೇಮಕ ಮಾಡಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಆರ್. ವಿಜಯಾನಂದ ಶರ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಇಲಾಖೆ.

5/9

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ ಈ ಆದೇಶವನ್ನು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ, ಅದರ 200 ಪ್ರತಿಗಳನ್ನು ಒದಗಿಸಲು ಕೋರಿದೆ.

ಗೆ:

1. ಪ್ರಧಾನ ಮಹಾಲೇಖಪಾಲರು, (ಲೆಕ್ಕಪತ್ರ: ಪರಿಶೋಧನೆ) ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಬೆಂಗಳೂರು.

ಪು.ತಿ.ನೋ.

9/13